# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಸಂ. ಬಿಐಎಎಪಿಎ/ಟಿಪಿ/ಸಿಸಿ/131/2023-24 2388 ದಿನಾಂಕ: 14 FEB 2024

## "ಪ್ರಾರಂಭಿಕ ಪ್ರಮಾಣ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೊಜನಾ ಕಾಯ್ದೆ 1961 ರ ಕಲಂ 15(1) ರನ್ವಯ)

(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)

ವಿಷಯ: ಯಲಹಂಕ (ಹಳೇ ಬೆಂಗಳೂರು ಉತ್ತರ (ಅಪರ)) ತಾಲ್ಲೂಕು, ಜಾಲ ಹೋಬಳಿ, ಚಿಕ್ಕಜಾಲ ಗ್ರಾಮದ ಸ.ನಂ. 72 ರಲ್ಲಿ 0ಎ-26ಗು ವಿಸ್ತೀರ್ಣ ಪ್ರದೇಶಕ್ಕೆ ಅನುಮೋದಿತ ಪರಿಷ್ಕೃತ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸದ ಖಾತಾ ಸಂಖ್ಯೆ: 2256/72 (ಸ್ವತ್ತಿನ ಸಂಖ್ಯೆ: 150200203101102621) ರಲ್ಲಿ 2325.44 ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಉಪಯೋಗದ (ಸ್ಟಿಲ್ಟ್ + ನೆಲ ಮತ್ತು ಮೇಲಿನ ಮೂರು ಅಂತಸ್ತುಗಳಲ್ಲಿ ಒಟ್ಟು 40 ವಸತಿ ಘಟಕಗಳುಳ್ಳ ಅಪಾರ್ಟ್‌ಮೆಂಟ್) ಕಟ್ಟಡ ನಿರ್ಮಿಸುವ ಸಂಬಂಧ ಈ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿ ಸಲ್ಲಿಸಿರುವ ಅರ್ಜಿಯ ಬಗ್ಗೆ.

ಉಲ್ಲೇಖ: 1) ಈ ಪ್ರಾಧಿಕಾರದ ಮಾರ್ಪಾಡಿತ ಏಕ ನಿವೇಶನ ವಸತಿ ವಿನ್ಯಾಸ ಮಂಜೂರಾತಿ ಆದೇಶ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ1/ಐನಿ/ಎಲ್‌ಎಒ/18/2012-13, ದಿನಾಂಕ:11/03/2015.

| | |
|---|---|
| 2) ಅರ್ಜಿದಾರರ ಅರ್ಜಿ ಸಂಖ್ಯೆ ಮತ್ತು ದಿನಾಂಕ : | 5997 ದಿನಾಂಕ: 18/10/2023 ಹಾಗೂ ಮನವಿ ಪತ್ರ ದಿನಾಂಕ: 02/12/2023. |
| 3) ಈ ಕಛೇರಿ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: | 08/12/2023. |
| 4) ಪ್ರಾಧಿಕಾರಕ್ಕೆ ಶುಲ್ಕವನ್ನು ಪಾವತಿಸಿರುವ ವಿವರ : | ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ 0012946 ದಿನಾಂಕ: 25/01/2024 ರಲ್ಲಿ ರೂ. 4,41,520/- (ನಾಲ್ಕು ಲಕ್ಷದ ನಲವತ್ತೊಂದು ಸಾವಿರದ ಐದು ನೂರ ಇಪಪ್ಪು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಿರುತ್ತಾರೆ. |
| 5) ಅರ್ಜಿದಾರರ ಮನವಿ ಪತ್ರ ದಿನಾಂಕ: | 12/02/2024 |

* * * * *

Sri Muralidhar M.G S/o Late M. Gurappa, Sri V.S Ravishankar S/o Late Vagata Srinivas & Sri A.J Amar Singh S/o Late Jaganath Singh A.R ರವರುಗಳ ಪರವಾಗಿ ನೋಂದಾಯಿತ ಜಿಪಿಎದಾರರು & ಜಂಟಿ ಅಭಿವೃದ್ಧಿದಾರರಾದ M/s Stature Homes Builders & Developers A Partnership Firm Represented by its Partners Sri M. Neelakanta Naidu S/o Sri M. Narasimhalu Naidu and Sri Bandaru Venkatadri Venkata Ramana S/o Sri B.V. Srinivasalu ರವರುಗಳು ಯಲಹಂಕ (ಹಳೇ ಬೆಂಗಳೂರು ಉತ್ತರ (ಅಪರ)) ತಾಲ್ಲೂಕು, ಜಾಲ ಹೋಬಳಿ, ಚಿಕ್ಕಜಾಲ ಗ್ರಾಮದ ಸ.ನಂ. 72 ರಲ್ಲಿ 0ಎ-26ಗು ವಿಸ್ತೀರ್ಣ ಪ್ರದೇಶಕ್ಕೆ ಅನುಮೋದಿತ ಪರಿಷ್ಕೃತ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸದ ಖಾತಾ ಸಂಖ್ಯೆ: 2256/72 (ಸ್ವತ್ತಿನ ಸಂಖ್ಯೆ: 150200203101102621) ರಲ್ಲಿ 2325.44 ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಉಪಯೋಗದ (ಸ್ಟಿಲ್ಟ್ + ನೆಲ ಮತ್ತು ಮೇಲಿನ ಮೂರು ಅಂತಸ್ತುಗಳಲ್ಲಿ ಒಟ್ಟು 40 ವಸತಿ ಘಟಕಗಳುಳ್ಳ ಅಪಾರ್ಟ್‌ಮೆಂಟ್) ಕಟ್ಟಡ ನಿರ್ಮಿಸುವ ಸಂಬಂಧ ಈ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿ ಉಲ್ಲೇಖ (1) ರಂತೆ ಅರ್ಜಿ ಸಲ್ಲಿಸಲಾಗಿತ್ತು. ಉಲ್ಲೇಖ (2) ರಲ್ಲಿನ ಈ ಕಛೇರಿ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು ಪಾವತಿಸಲು ಹಾಗೂ ಚಾಲ್ತಿ ಸಾಲಿನಲ್ಲಿ ಕಂದಾಯ ಪಾವತಿಸಿರುವ ಬಗ್ಗೆ ಕಂದಾಯ ರಶೀದಿ, ಯಲಹಂಕ ಏರ್‌ಪೋರ್ಸ್ ರವರಿಂದ ಪಡೆದ ನಿರಾಕ್ಷೇಪಣಾ ಪತ್ರ, ಕಟ್ಟಡದ ಎತ್ತರದ ಸಂಬಂಧ ಎರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ರವರಿಂದ ಪಡೆದ ನಿರಾಕ್ಷೇಪಣಾ ಪತ್ರದೊಂದಿಗೆ ಉದ್ದೇಶಿತ ಕಟ್ಟಡದ ನಕ್ಷೆಯ ನೀಲಿ ಪ್ರತಿಗಳನ್ನು ಅರ್ಜಿದಾರರು/ಅಭಿಯಂತರರ ಸಹಿಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿತ್ತು.

ಉಲ್ಲೇಖ (3) ರಲ್ಲಿ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಚಾಲ್ತಿ ಸಾಲಿನಲ್ಲಿ ಕಂದಾಯ ಪಾವತಿಸಿರುವ ಬಗ್ಗೆ ಕಂದಾಯ ರಶೀದಿ, ಕಟ್ಟಡದ ಎತ್ತರದ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ರವರಿಂದ ಪಡೆದ ನಿರಾಕ್ಷೇಪಣಾ ಪತ್ರ ಸಲ್ಲಿಸಿರುತ್ತಾರೆ. ಅಲ್ಲದೇ ಉಲ್ಲೇಖ (5) ರ ಮನವಿ ಪತ್ರದಲ್ಲಿ ಏರ್‌ಪೋರ್ಸ್, ಯಲಹಂಕ ರವರಿಂದ ನಿರಾಕ್ಷೇಪಣಾ ಪತವನ್ನು ಪಡೆಯಲು ಸಲ್ಲಿಸಿರುವ ಮನವಿ ಅರ್ಜಿಯನ್ನು ಸಲ್ಲಿಸಿ. ನಿರಾಕ್ಷೇಪಣಾ ಪತ್ರವನ್ನು ಪಡೆದ ನಂತರ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ತಿಳಿಸುತ್ತಾ, ಉದ್ದೇಶಿತ ಕಟ್ಟಡದ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಆದ್ದರಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಗಿನ ನಿಬಂಧನೆಗಳೊಂದಿಗೆ ನೀಡಲಾಗಿದೆ.

**ನಿಬಂಧನೆಗಳು**

1. ಈ ಪ್ರಾಧಿಕಾರದ ವಸತಿ ಉಪಯೋಗದ ಪರಿಷ್ಕೃತ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆ ಆದೇಶ ಪತ್ರ ಸಂಖ್ಯೆ: ಬಿಐಎಪಿಎ/ಟಿಪಿ1/ಏನಿ/ಎಲ್ಎಒ/18/2012–13, ದಿನಾಂಕ:11/03/2015 ರ ಆದೇಶದಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.
2. ದಿನಾಂಕ: 12/02/2024 ರಂದು ಸಲ್ಲಿಸಿರುವ ಮನವಿ ಪತ್ರದಂತೆ ಉದ್ದೇಶಿತ ಪ್ರದೇಶದಲ್ಲಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವ ಪೂರ್ವದಲ್ಲಿ ಏರ್‌ಪೋರ್ಸ್, ಯಲಹಂಕ ರವರಿಂದ ನಿರಾಕ್ಷೇಪಣಾ ಪತ್ರವನ್ನು ಕಡ್ಡಾಯವಾಗಿ ಪಡೆಯತಕ್ಕದ್ದು, ಹಾಗೂ ಸದರಿ ಪ್ರತಿಯನ್ನು ಪ್ರಾಧಿಕಾರದ ಮಾಹಿತಿಗಾಗಿ ಸಲ್ಲಿಸುವ ಷರತ್ತಿಗೊಳಪಟ್ಟಿರುತ್ತದೆ. ಅಲ್ಲದೇ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
3. ಯೋಜಿಸಿರುವ ಕಟ್ಟಡಗಳನ್ನು ವಸತಿ ಉದ್ದೇಶಕ್ಕಾಗಿಯೇ ಉಪಯೋಗಿಸಬೇಕು.
4. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ **ದಿನಾಂಕ: 14/02/2024 ರಿಂದ 13/02/2026 ರವರೆಗೆ** ಮಾತ್ರ ನೀಡಲಾಗಿರುತ್ತದೆ.
5. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಆಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ಚಿಕ್ಕಜಾಲ ಗ್ರಾಮ ಪಂಚಾಯಿತಿ** ರವರಿಂದ ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.
6. ವಸತಿ ಉಪಯೋಗದ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಕಟ್ಟಡ ಪರವಾನಿಗೆಯನ್ನು **ಚಿಕ್ಕಜಾಲ ಗ್ರಾಮ ಪಂಚಾಯಿತಿ**ಯಿಂದ ಪಡೆಯಬೇಕು.
7. ವಸತಿ ಉಪಯೋಗದ ಕಟ್ಟಡಗಳನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಅನುಮೋದನೆ ನೀಡಿರುವುದರಲ್ಲಿ ಯಾವುದೇ ಬದಲಾವಣೆಯನ್ನು ಕೈಗೊಂಡಲ್ಲಿ ಈ ಕಛೇರಿಯ ಪೂರ್ವಾನುಮತಿ ಪಡೆಯತಕ್ಕದ್ದು.
8. ವಸತಿ ಉಪಯೋಗಕ್ಕೆ ಕಟ್ಟಡಗಳನ್ನು ನಿರ್ಮಿಸಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ಕಟ್ಟತಕ್ಕದ್ದು.
9. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಾಧಿಕಾರದ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.
10. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿ ರವರ Consent Order No. CTE-125590, PCB ID 183313 ದಿನಾಂಕ: 15/12/2023 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗುವ ಎಲ್ಲಾ ನಿಬಂಧನೆಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು ಹಾಗೂ ಪಾಲಿಸತಕ್ಕದ್ದು.
11. ಕಟ್ಟಡದ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ ಪಡೆದ Structural Details ರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.
12. ಪ್ರಸ್ತಾವನೆ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾರವರು ದಿನಾಂಕ: 19/01/2024 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
13. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ

…ಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110
ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.

14. ಈ ಪ್ರಾರಂಭಿಕ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.
15. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯು ಕಟ್ಟಡದ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.
16. ಪ್ರಶ್ನಿತ ನಿವೇಶನದಲ್ಲಿ ಉದ್ದೇಶಿಸಿರುವ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.
17. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.
18. ಈ ಅನುಮತಿಯನ್ನು ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.
19. ಅಂತರಾಷ್ಟ್ರೀಯ ವಾಯು ನೆಲೆಯ ಪರಿಸರದಲ್ಲಿ ಬರುವುದರಿಂದ ಶಬ್ದಮಾಲಿನ್ಯ ಸಹಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.
20. ವಸತಿ ಉಪಯೋಗದ ಕಟ್ಟಡವನ್ನು ಅನುಮೋದನೆ ಸಂಬಂಧ ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ ನಿರಾಕ್ಷೇಪಣಾ ಪತ್ರಗಳನ್ನು ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.
21. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

14/3/2024

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಇವರಿಗೆ:*

**ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು,**
ಚಿಕ್ಕಜಾಲ ಗ್ರಾಮ ಪಂಚಾಯಿತಿ
ಜಾಲ ಹೋಬಳಿ,
ಯಲಹಂಕ ತಾಲ್ಲೂಕು,
ಬೆಂಗಳೂರು ನಗರ ಜಿಲ್ಲೆ
— ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

ಪ್ರತಿಯನ್ನು:

1. **ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ,** ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು–560027 ಇವರ ಮಾಹಿತಿಗಾಗಿ ಕಳುಹಿಸಿದೆ.
2. Sri Muralidhar M.G S/o Late M. Gurappa, Sri V.S Ravishankar S/o Late Vagata Srinivas & Sri A.J Amar Singh S/o Late Jaganath Singh A.R ರವರುಗಳ ಪರವಾಗಿ ನೋಂದಾಯಿತ ಜಿಪಿಎದಾರರು & ಜಂಟಿ ಅಭಿವೃದ್ಧಿದಾರರಾದ M/s Stature Homes Builders & Developers A Partnership Firm Represented by its Partners Sri M. Neelakanta Naidu S/o Sri M. Narasimhalu Naidu and Sri Bandaru Venkatadri Venkata Ramana S/o Sri B.V. Srinivasalu, No.371 and 373, BDA Link Road, 8th Cross, Dwaraka Nagar, Channasandra, Bengaluru-560098 ರವರುಗಳ ಮಾಹಿತಿಗಾಗಿ.
3. ಕಛೇರಿ ಪ್ರತಿ.